# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 22–03–2018**

**ಪ್ರಕಟಣೆಯ ಕೃಪೆಗಾಗಿ............**

ವಿಜಯಪುರ: ಐತಿಹಾಸಿಕ ಸಂಶೋಧನೆಗೆ ಇತಿಹಾಸದ ಮೂಲ ಅಕರಗಳನ್ನು ಶೈಕ್ಷಣಿಕ ವ್ಯವಸ್ಥೆಯಲ್ಲಿ ಅಳವಡಿಸಿಕೊಳ್ಳುವುದು ಅತ್ಯವಶ್ಯಕ ಎಂದು ಖ್ಯಾತ ಇತಿಹಾಸ ತಜ್ಞ ಕೃಷ್ಣ ಕೋಲ್ಹಾರ ಕುಲಕರ್ಣಿ ಅಭಿಪ್ರಾಯಪಟ್ಟರು.

ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಮತ್ತು ಇತಿಹಾಸ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೂರು ದಿನದ 'ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಕಾರ್ಯಗಾರ ಹಾಗೂ ಕರ್ನಾಟಕದ ಕೋಟೆಗಳು ಕುರಿತ ಛಾಯಾಚಿತ್ರ ಪ್ರದರ್ಶನ' ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕದ ಇತಿಹಾಸವನ್ನು ಅರ್ಥಪೂರ್ಣಗೊಳಿಸಲು ಮತ್ತು ಇತಿಹಾಸದ ಮೂಲ ಆಕರಗಳನ್ನು ಅಧ್ಯಯನ ಮಾಡಲು ಕೇವಲ ಕನ್ನಡ ಭಾಷೆ ತಿಳಿದಿದ್ದರೆ ಸಾಲದು. ಅದರ ಜೊತೆಗೆ ಪರ್ಷಿಯನ್, ಅರೇಬಿಕ್, ಉರ್ದು ಹಾಗೂ ಇಂಗ್ಲಿಷ್ ಭಾಷೆಗಳನ್ನು ಅರಿತುಕೊಂಡಿರಬೇಕು ಎಂದು ಅವರು ತಿಳಿಸಿದರು.

ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಇತಿಹಾಸ ಪ್ರಜ್ಞೆ ತಡವಾಗಿ ಬಂದಿದೆ. ನಮ್ಮ ರಾಜ್ಯದ ಇತಿಹಾಸದ ಮೂಲ ಆಕರಗಳು ಬೇರೆ ಬೇರೆ ರಾಜ್ಯಗಳಲ್ಲಿ ಹರಿದು ಹಂಚಿ ಹೋಗಿವೆ. ಮತ್ತು ನಮ್ಮಲ್ಲಿ ಐತಿಹಾಸಿಕ ದಾಖಲೆಗಳ ಕೊರತೆ ಇದೆ. ಅವುಗಳನ್ನು ಒಂದೇ ಕಡೆಯಲ್ಲಿ ಸೇರಿಸುವ ಪ್ರಯತ್ನ ನಡೆಯಬೇಕಿದೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ.ವಿಜಯ್ ಪೂಣಚ್ಚ ತಂಬಂಡ ಪ್ರಧಾನ ಭಾಷಣ ಮಾಡಿ, ಕರ್ನಾಟಕದ ಇತಿಹಾಸ ಎಂದರೆ ಮೈಸೂರು ಚರಿತ್ರೆ ಎಂದೇ ಭಾವಿಸಲಾಗುತ್ತಿದೆ. ಅಂತಹ ಮನೋಭಾವ ಇರುವವರೇ ಇಂದು ಚರಿತ್ರೆಯ ಕ್ಷೇತ್ರದಲ್ಲಿ ಸೇರಿಕೊಂಡಿದ್ದಾರೆ. ಅಲ್ಲದೇ ಉತ್ತರ ಕರ್ನಾಟಕದ ಐತಿಹಾಸಿಕ ಸ್ಥಳಗಳಿಗೆ ಕಡಿಮೆ ಪ್ರಾಮುಖ್ಯತೆ ನೀಡುತ್ತಿರುವುದು ವಿಷಾದನೀಯ ಎಂದರು.

ನಮ್ಮ ಬದುಕಿಗೆ ಸ್ಪಂದಿಸುವುದೇ ಇತಿಹಾಸ. ಸಮುದಾಯದ ಇತಿಹಾಸ ಬೆರೆಯಲು ದಾಖಲೆಗಳು ಪ್ರಮುಖ ಪಾತ್ರವಹಿಸುತ್ತವೆ ಎಂದು ಸ್ಪಷ್ಟಪಡಿಸಿದರು.

ರಾಜ್ಯ ಪತ್ರಾಗಾರ ಇಲಾಖೆ ಸಹಾಯಕ ನಿರ್ದೇಶಕ ಮಹೇಶ ಮಾತನಾಡಿ, ಕರ್ನಾಟಕದ ಐತಿಹಾಸಿಕ ದಾಖಲೆಗಳನ್ನು ಹುಡುಕಲು ನೆರೆ ರಾಜ್ಯಗಳಿಗೆ ಮೊರೆ ಹೋಗುವುದು ಅನಿವಾರ್ಯವಾಗಿದೆ. ಆದರೆ ಬೇರೆ ಬೇರೆ ಪತ್ರಾಗಾರ ಇಲಾಖೆಗಳಲ್ಲಿ ಇರುವ ಕರ್ನಾಟಕ ಇತಿಹಾಸದ ದಾಖಲೆಗಳನ್ನು ರಾಜ್ಯ ಪತ್ರಾಗಾರ ಇಲಾಖೆ ತಂದು ಜನಸಮಾನ್ಯರಿಗೂ ತಲುಪಿಸುವಂತಹ ಕಾರ್ಯ ನಡೆಯುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಮಾತನಾಡಿ, ಮಹಿಳಾ ದೃಷ್ಠಿಕೋನದಿಂದ ಇತಿಹಾಸದ ಶಾಸನಗಳನ್ನು ನೋಡಿದಾಗ ಹೊಸದೊಂದ ದೃಷ್ಠಿಕೋನವೇ ತೆರೆಯುತ್ತದೆ ಎಂದರು.

ಸಂಶೋಧನೆಯ ಆಕರಗಳ ಹುಡುಕಾಟ ಅವಶ್ಯಕ. ಅವುಗಳನ್ನು ಪಡೆದು ವಿಭಿನ್ನ ಶೈಲಿಯ ಮೂಲಕ ಸಂಶೋಧನಾ ಪ್ರಬಂಧವನ್ನು ಗಟ್ಟಿಗೊಳಿಸಬೇಕು ಎಂದು ವಿದ್ಯಾರ್ಥಿನಿಯರಿಗೆ ಸಲಹೆ ನೀಡಿದರು.

ಬೌದ್ಧಿಕ ಹಕ್ಕಿನ ಹೋರಾಟ ಮಾಡುವ ಈ ಕಾಲದಲ್ಲಿ ತಮ್ಮ ಶ್ರಮದ ಪ್ರತೀಕವಾದ ಕರ್ನಾಟಕ ಕೋಟೆಗಳ ಛಾಯಾಚಿತ್ರಗಳ ಗ್ರಂಥವನ್ನು ನಿಸ್ವಾರ್ಥದಿಂದ ವಿದ್ಯಾರ್ಥಿನಿಯರ ಶ್ರೇಯೋಭಿವೃದ್ಧಿಗಾಗಿ ಮಹಿಳಾ ವಿವಿಗೆ ಹಸ್ತಾಂತರಿಸಿರುವುದು ಹೆಮ್ಮೆಯ ಸಂಗತಿ ಎಂದು ಖ್ಯಾತ ಛಾಯಾಗ್ರಾಹಕ ವಿಶ್ವನಾಥ ಸುವರ್ಣ ಅವರನ್ನು ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಖ್ಯಾತ ಛಾಯಾಗ್ರಾಹಕ ವಿಶ್ವನಾಥ ಸುವರ್ಣ ಅವರ ಕರ್ನಾಟಕ ಕೋಟೆಗಳ ಛಾಯಾಚಿತ್ರ ಗ್ರಂಥವನ್ನು, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿನಿಯರು ಹೊರತಂದ ಮಹಿಳಾ ಧ್ವನಿ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ವಿವಿಧ ನಿಖಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಪ್ರದರ್ಶಕ ಕಲೆಗಳ ವಿಭಾಗದ ವಿದ್ಯಾರ್ಥಿನಿಯರು ನಾಡಗೀತೆ ಮತ್ತು ಮಹಿಳಾ ಗೀತೆ ಹಾಡಿದರು. ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯದ ನಿರ್ದೇಶಕ ಪ್ರೊ.ಓಂಕಾರ ಕಾಕಡೆ ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿದರು. ಇತಿಹಾಸ ವಿಭಾಗದ ಪ್ರಾಧ್ಯಾಪಕ ಡಾ.ಆರ್.ವಿ. ಗಂಗಶೆಟ್ಟಿ ಪರಿಚಯಿಸಿದರು. ಪ್ರೊ. ಸಕ್ಪಾಲ್ ಹೂವಣ್ಣ ವಂದಿಸಿದರು. ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯದ ಸಹಾಯಕ ನಿರ್ದೇಶಕ ಡಾ.ಹನುಮಂತಯ್ಯ ಪೂಜಾರಿ ನಿರೂಪಿಸಿದರು.

**ಫೋಟೋ ಕ್ಯಾಪ್ಷನ್:**

1) **ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಮತ್ತು ಇತಿಹಾಸ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೂರು ದಿನದ 'ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಕಾರ್ಯಗಾರ**

ಹಾಗೂ ಕರ್ನಾಟಕದ ಕೋಟೆಗಳು ಕುರಿತ ಛಾಯಾಚಿತ್ರ ಪ್ರದರ್ಶನ' ಕಾರ್ಯಗಾರವನ್ನು ಖ್ಯಾತ ಇತಿಹಾಸ ತಜ್ಞ ಕೃಷ್ಣ ಕೋಲ್ಹಾರ ಕುಲಕರ್ಣಿ ಉದ್ಘಾಟಿಸಿದರು.

2) ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಮತ್ತು ಇತಿಹಾಸ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೂರು ದಿನದ 'ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಕಾರ್ಯಗಾರ ಹಾಗೂ ಕರ್ನಾಟಕದ ಕೋಟೆಗಳು ಕುರಿತ ಛಾಯಾಚಿತ್ರ ಪ್ರದರ್ಶನ' ಕಾರ್ಯಗಾರವನ್ನು ಖ್ಯಾತ ಇತಿಹಾಸ ತಜ್ಞ ಕೃಷ್ಣ ಕೋಲ್ಹಾರ ಕುಲಕರ್ಣಿ ಉದ್ಘಾಟಿಸಿ ಮಾತನಾಡಿದರು.

3) ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಮತ್ತು ಇತಿಹಾಸ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೂರು ದಿನದ 'ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಕಾರ್ಯಗಾರ ಹಾಗೂ ಕರ್ನಾಟಕದ ಕೋಟೆಗಳು ಕುರಿತ ಛಾಯಾಚಿತ್ರ ಪ್ರದರ್ಶನ' ಕಾರ್ಯಗಾರದಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ.ವಿಜಯ್ ಪೂಣಚ್ಚ ತಂಬಂಡ ಪ್ರಧಾನ ಭಾಷಣ ಮಾಡಿದರು.

4) ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಮತ್ತು ಇತಿಹಾಸ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೂರು ದಿನದ 'ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಕಾರ್ಯಗಾರ ಹಾಗೂ ಕರ್ನಾಟಕದ ಕೋಟೆಗಳು ಕುರಿತ ಛಾಯಾಚಿತ್ರ ಪ್ರದರ್ಶನ' ಕಾರ್ಯಗಾರದಲ್ಲಿ ರಾಜ್ಯ ಪತ್ರಾಗಾರ ಇಲಾಖೆ ಸಹಾಯಕ ನಿರ್ದೇಶಕ ಮಹೇಶ ಮಾತನಾಡಿದರು.

5) ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಮತ್ತು ಇತಿಹಾಸ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೂರು ದಿನದ 'ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಕಾರ್ಯಗಾರ ಹಾಗೂ ಕರ್ನಾಟಕದ ಕೋಟೆಗಳು ಕುರಿತ ಛಾಯಾಚಿತ್ರ ಪ್ರದರ್ಶನ' ಕಾರ್ಯಗಾರದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಮಾತನಾಡಿದರು.

6) ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಮತ್ತು ಇತಿಹಾಸ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೂರು ದಿನದ 'ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಕಾರ್ಯಗಾರ ಹಾಗೂ ಕರ್ನಾಟಕದ ಕೋಟೆಗಳು ಕುರಿತ ಛಾಯಾಚಿತ್ರ ಪ್ರದರ್ಶನ' ಕಾರ್ಯಗಾರದಲ್ಲಿ ಖ್ಯಾತ ಛಾಯಾಗ್ರಾಹಕ ವಿಶ್ವನಾಥ ಸುವರ್ಣ ಅವರ ಕರ್ನಾಟಕ ಕೋಟೆಗಳ ಛಾಯಾಚಿತ್ರಗಳ ಮಾಹಿತಿಯನ್ನು ವಿದ್ಯಾರ್ಥಿನಿಯರಿಗೆ ನೀಡಿದರು.

7) ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಮತ್ತು ಇತಿಹಾಸ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೂರು ದಿನದ 'ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಕಾರ್ಯಗಾರ ಹಾಗೂ ಕರ್ನಾಟಕದ ಕೋಟೆಗಳು ಕುರಿತ ಛಾಯಾಚಿತ್ರ ಪ್ರದರ್ಶನ' ಕಾರ್ಯಗಾರದಲ್ಲಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿನಿಯರು ಹೊರತಂದ ಮಹಿಳಾ ಧ್ವನಿ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು.

8) ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಮತ್ತು ಇತಿಹಾಸ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೂರು ದಿನದ 'ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಕಾರ್ಯಗಾರ ಹಾಗೂ ಕರ್ನಾಟಕದ ಕೋಟೆಗಳು ಕುರಿತ ಛಾಯಾಚಿತ್ರ ಪ್ರದರ್ಶನ' ಕಾರ್ಯಗಾರದಲ್ಲಿ ಖ್ಯಾತ ಛಾಯಾಗ್ರಾಹಕ ವಿಶ್ವನಾಥ ಸುವರ್ಣ ಅವರ ಕರ್ನಾಟಕ ಕೋಟೆಗಳ ಛಾಯಾಚಿತ್ರ ಗ್ರಂಥವನ್ನು ಬಿಡುಗಡೆ ಮಾಡಲಾಯಿತು.



